APRIL 09, 2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ–ಪ್ರದೇಶ ಸಮಾಚಾರ

<><><>

ಓದಿದವರು: ಹರ್ಷವರ್ಧನ ಶೀಲವಂತ

<><><>

ಆಕಾಶವಾಣಿಯ ನಮ್ಮ ಆತ್ಮೀಯ ಕೇಳುಗರಿಗೆಲ್ಲ, ಯುಗಾದಿ ಹಬ್ಬದ

ಹಾರ್ದಿಕ ಶುಭಾಶಯಗಳು.

<><><>

ಮುಖ್ಯಾಂಶಗಳು:

<><><>

- ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಬಿಸಿಲಿನ ಧಗೆ; ಮುನ್ನೆಚ್ಚರಿಕೆ ವಹಿಸುವಂತೆ, ಆರೋಗ್ಯ ಇಲಾಖೆ ಮನವಿ.
- 18ನೇ ಲೋಕಸಭಾ ಸಾರ್ವತ್ರಿಕ ಚುನಾವಣೆ; ಇದೇ 26 ರಂದು, ರಾಜ್ಯದ 14 ಕ್ಷೇತ್ರಗಳಲ್ಲಿ, ಪ್ರಥಮ ಹಂತದ ಮತದಾನ.
- ಲೋಕಸಭಾ ಚುನಾವಣೆ; ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ, ಸಾವಿರದ 3ನೂರಾ 84 ಪ್ರಕರಣಗಳು ದಾಖಲು.
- ಇಂದು, ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯ; ಸಂಭ್ರಮದ ಯುಗಾದಿ ಹಬ್ಬಕ್ಕೆ ನಾಡು ಅಣಿ.

<><><>

ಈಗ ವಾರ್ತೆಗಳ ವಿವರ

<><><>

ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದ ಜನ, ಬಿಸಿಲಿನ ಉಷ್ಣಾಘಾತದಿಂದ ಪಾರಾಗಲು, ಆಹಾರ ಪದ್ಧತಿ ಬದಲಿಸುವ ಅಗತ್ಯವಿದೆ ಎಂದು, ಬಾಗಲಕೋಟೆ ಜಿಲ್ಲೆ ಆಯುಷ್ ಅಧಿಕಾರಿ ಅಕ್ಕಮಹಾದೇವಿ ಗಾಣಿಗೇರ ಹೇಳಿದ್ದಾರೆ. ಬೇಸಿಗೆ ದಿನಗಳಲ್ಲಿ ಪಿತ್ತದೋಷವು ಹೆಚ್ಚುತ್ತಿದ್ದು, ಇದರಿಂದ ಚರ್ಮದ ಸಮಸ್ಯೆಗಳು, ಅಜೀರ್ಣ, ಆಯಾಸ ಇತ್ಯಾದಿ ಜೀರ್ಣ ಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳಿಗೆ ಕಾರಣವಾಗುತ್ತದೆ. ತಾಜಾ ಹಣ್ಣಿನ ರಸ ಹಾಗೂ ಶುದ್ಧ ನೀರು ಕುಡಿಯುವಂತೆ, ಅವರು ಸಲಹೆ ಮಾಡಿದ್ದಾರೆ.

<><><>

ಕಲಬುರಗಿಯಲ್ಲಿ ದಿನದ ಗರಿ ್ಠ ಉಷ್ಣಾಂಶ 42 ದಶಾಂಶ 7 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಮುಂದಿನ ಎರಡು ದಿನಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಅಲ್ಪ ಪ್ರಮಾಣದ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ರಾಯಚೂರು ಜಿಲ್ಲೆಯ ದೇವಸೂಗೂರಿನಲ್ಲಿ 44 ದಶಾಂಶ 5 ಡಿಗ್ರಿ ಸೆಲ್ಸಿಯಸ್ ತಾಪಮಾನ ನಿನ್ನೆ ದಾಖಲಾಗಿದೆ. ಭಾನುವಾರ ಗಬ್ಬೂರಿನಲ್ಲಿ ರಾಜ್ಯದ ಅತೀ ಹೆಚ್ಚು 45 ದಶಾಂಶ 3 ರಷ್ಟು ತಾಪಮಾನ ದಾಖಲಾಗಿತ್ತು.

<><><>

ಬರಗಾಲದ ಹಿನ್ನೆಲೆ, ಹಾವೇರಿ ಜಿಲ್ಲೆಯ 98 ಸಾವಿರದ 561 ಶಾಲಾ ಮಕ್ಕಳಿಗೆ ಬರುವ 11 ರಿಂದ 41 ದಿನಗಳ ಕಾಲ, ಬಿಸಿಯೂಟ ವಿತರಿಸಲಾಗುವುದು ಎಂದು, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಅಕ್ಷಯ್ ಶ್ರೀಧರ್ ತಿಳಿಸಿದ್ದಾರೆ.

<><><>

ವಿಜಯನಗರ ಜಿಲ್ಲೆಯಲ್ಲಿ, ಏಳು ವ ್ಗಗಳ ನಂತರ, ಗರಿ ್ಠ ತಾಪಮಾನ 42 ದಶಾಂಶ 1 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಹೊಸಪೇಟೆಯಲ್ಲಿ 42 ದಶಾಂಶ 1 ಡಿಗ್ರಿ, ಕೊಟ್ಟೂರು, ಕೂಡ್ಲಿಗಿ, ಹೂವಿನ ಹಡಗಲಿಗಳಲ್ಲಿ 40 ಡಿಗ್ರಿ, ಹಗರಿಬೊಮ್ಮನಹಳ್ಳಿಯಲ್ಲಿ 38 ಡಿಗ್ರಿ ಹಾಗೂ ಹರಪ್ಪನಹಳ್ಳಿಯಲ್ಲಿ 39 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಮುಂದಿನ ಮೂರರಿಂದ ನಾಲ್ಕು ದಿನಗಳ ಕಾಲ ಇದೇ ರೀತಿ ತಾಪಮಾನ ಹೆಚ್ಚಾಗಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಿಜಯನಗರ ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಶಂಕರ್ ನಾಯಕ್ ಆಕಾಶವಾಣಿಗೆ, ಮುಂಜಾಗ್ರತಾ ಕ್ರಮಗಳ ಮಾಹಿತಿ ನೀಡಿದ್ದಾರೆ.

<><><>

ಡಾ. ಶಂಕರ್ ನಾಯಕ್ ಧ್ವನಿ 40 ಸೆಕೆಂದುಗಳು

<><><>

ಕರಾವಳಿಯಲ್ಲಿ ತಾಪಮಾನ ಏರುಗತಿಯಲ್ಲಿದ್ದು, ಭಾರೀ ಬಿಸಿಲಿನಿಂದಾಗಿ ತಾಪಾಘಾತದ ಭೀತಿ ಕಾಡುತ್ತಿದ್ದು, ದಕ್ಷಿಣಕನ್ನಡ ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ವಹಿಸಲಾಗಿದೆ. ತಾಲೂಕಿನ ಎಲ್ಲಾ ಆಸ್ಪತ್ರೆಗಳಲ್ಲಿ ವಿಶೇ ್ ಹಾಸಿಗೆ ಮೀಸಲಿರಿಸಲಾಗಿದೆ. ಮಂಗಳೂರಿನ ವೆನ್ಲಾಕ್ ಆಸ್ಪತ್ರೆಯಲ್ಲಿ 8 ಹಾಸಿಗೆಯುಳ್ಳ ಐ.ಸಿ.ಯು. ಕೇರ್ ಮತ್ತು 18 ಹಾಸಿಗೆಗಳುಳ್ಳ ಸಾಮಾನ್ಯ ವಾರ್ಡನ್ನು ಸಜ್ಜುಗೊಳಿಸಲಾಗಿದೆ ಎಂದು ಆರೋಗ್ಯಾಧಿಕಾರಿ ಮಾಹಿತಿ ನೀಡಿದ್ದಾರೆ.

<><><>

ಬೇಸಿಗೆ ಮತ್ತು ಬರಗಾಲ ಹಿನ್ನೆಲೆ, ಕಲಬುರಗಿ ಜಿಲ್ಲೆಯ ಚಿಂಚೋಳಿ ವನ್ಯಜೀವಿ ವಲಯದ, ಅರಣ್ಯ ಪ್ರದೇಶದಲ್ಲಿ, ಕಾಡು ಪ್ರಾಣಿ ಮತ್ತು ಪಕ್ಷಿಗಳ ನೀರಿನ ದಾಹ ತೀರಿಸಲು ಕೃತಕ ನೀರಿನ ತೊಟ್ಟಿಗೆ ಅರಣ್ಯ ಇಲಾಖೆ ಟ್ಯಾಂಕರ್ ಮೂಲಕ ನೀರು ಪೂರೈಸುತ್ತದೆ. 15 ರಿಂದ 20 ಸಾವಿರ ಲೀಟರ್ ಸಾಮರ್ಥ್ಯದ ನೀರು ಗುಂಡಿಗಳಿಗೆ, 5–6 ದಿನಕ್ಕೊಮ್ಮೆ ಟ್ಯಾಂಕರ್ ಮೂಲಕ ನೀರು ಹಾಕಲಾಗುತ್ತಿದೆ. ಚಿಂಚೋಳಿ ವನ್ಯಜೀವಿ ವಲಯದ ಶೇರಿಬಿಕನಳ್ಳಿ, ಯಾಕತಪೂರ, ಸೋಮಲಿಂಗದಳ್ಳಿ ಹಾಗೂ ನೇಚರ್ಲಾ ಅರಣ್ಯ ಪ್ರದೇಶದಲ್ಲಿ, ತಲಾ 2 ಮತ್ತು ಅಂತಾವರಂ ಹಾಗೂ ಬುರುಗದೊಡ್ಡಿ ವಲಯದಲ್ಲಿ ತಲಾ 1 ಸೇರಿ, ಒಟ್ಟು 10 ನೀರು ಗುಂಡಿ ನಿರ್ಮಿಸಲಾಗಿದೆ ಎಂದು ಕಲಬುರಗಿ ಪ್ರಾದೇಶಿಕ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ ತಿಳಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ರಾಜ್ಯದಲ್ಲಿ ಇದೇ 26 ರಂದು ನಡೆಯಲಿರುವ 14 ಲೋಕಸಭಾ ಕ್ಷೇತ್ರಗಳಲ್ಲಿ ಉಮೇದುವಾರಿಕೆ ಹಿಂಪಡೆಯುವ ಪ್ರಕ್ರಿಯೆ ನಿನ್ನೆ ಅಂತ್ಯಗೊಂಡಿದೆ. ಒಟ್ಟು 247 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಒಟ್ಟು 358 ಮಂದಿ ನಾಮಪತ್ರ ಸಲ್ಲಿಸಿದ್ದರು. 419 ನಾಮಪತ್ರಗಳು ಸಲ್ಲಿಕೆಯಾಗಿದ್ದವು. ಈ ಪೈಕಿ 74 ನಾಮಪತ್ರಗಳನ್ನು ಪರಿಶೀಲನೆ ವೇಳೆ ಚುನಾವಣಾಧಿಕಾರಿಗಳು ತಿರಸ್ಕರಿಸಿದ್ದಾರೆ. ಕಣದಲ್ಲಿ 226 ಮಂದಿ ಪುರುಷರು ಹಾಗೂ 21 ಮಹಿಳೆಯರಿದ್ದಾರೆ.

<><><>

ಉಡುಪಿ–ಚಿಕ್ಕಮಗಳೂರು, ಹಾಸನ ಮತ್ತು ಕೋಲಾರ ಕ್ಷೇತ್ರಗಳಲ್ಲಿ ಮಹಿಳಾ ಅಭ್ಯರ್ಥಿಗಳಿಲ್ಲ; ಹಾಗೂ 14 ಕ್ಷೇತ್ರಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಸಹ ಕಣದಲ್ಲಿ ಇಲ್ಲ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಅತ್ಯಧಿಕ 29 ಅಭ್ಯರ್ಥಿಗಳು ಕಣದಲ್ಲಿದ್ದಾರೆ. 300 ಅಭ್ಯರ್ಥಿಗಳ ನಾಮಪತ್ರಗಳು ಸ್ವೀಕೃತವಾಗಿದ್ದವು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ.

<><><>

ವಿವಿಧ ಪಕ್ಷಗಳ ಮುಖಂಡರಿಂದ ಪ್ರಚಾರ ಕಾರ್ಯ ಭರದಿಂದ ಸಾಗಿದೆ. ಜಿಲ್ಲಾ ಸ್ವೀಪ್ ಸಮಿತಿಗಳಿಂದ ಮತದಾರ ಜಾಗೃತಿ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿವೆ.

<><><>

ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಲ್ಲಿ ಇದೇ 26 ರಂದು ಮೊದಲ ಹಂತದ ಮತದಾನ ನಡೆಯಲಿದೆ.

<><><>

ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ, ಉಲ್ಲಂಘಿಸಿದ ಸಾವಿರದ 3 ನೂರಾ 84 ಪ್ರಕರಣಗಳು ದಾಖಲಾಗಿವೆ. ಸಹಾಯವಾಣಿ ಹಾಗೂ ಪೋರ್ಟಲ್ ಮೂಲಕ ಸಾರ್ವಜನಿಕರ ಕುಂದುಕೊರತೆಗಳನ್ನು ಬಗೆಹರಿಸಲಾಗುತ್ತಿದೆ. ಸ್ವೀಕರಿಸಿದ ದೂರುಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ಮತದಾರರ ಸಹಾಯವಾಣಿ 1–9–5–0 ಮೂಲಕ, ಸಾರ್ವಜನಿಕ ಕುಂದುಕೊರತೆಗಳಿಗೆ ಸಂಬಂಧಿಸಿದ, 14 ಸಾವಿರದ 477 ಕರೆಗಳನ್ನು ಸ್ವೀಕರಿಸಿ, ವಿಲೇವಾರಿ ಮಾಡಲಾಗಿದೆ ಎಂದು, ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಪರ ರೋಡ ಶೋ ನಡೆಸಿದರು.

<><><>

ಇದೇ 14 ರಂದು ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಬಿಜೆಪಿ ಪರ ಪ್ರಚಾರ ಕೈಗೊಳ್ಳಲಿದ್ದಾರೆ ಎಂದು, ಮಾಜಿ ಸಚಿವ ಸಿ.ಟಿ.ರವಿ ಮೈಸೂರಿನಲ್ಲಿ ತಿಳಿಸಿದ್ದಾರೆ.

<><><>

18ನೇ ಲೋಕಸಭೆ ಚುನಾವಣೆ ಹಿನ್ನೆಲೆ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಏಪ್ರಿಲ್ 26 ರಂದು ಮತದಾನ ನಿಗದಿಯಾಗಿದೆ. ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 9 ವಿಶೇ ´ ಮಾದರಿ ಮತಗಟ್ಟೆಗಳನ್ನು ರೂಪಿಸಿ, ಮತದಾರರನ್ನು ವಿಶೇ ´ವಾಗಿ ಆಹ್ವಾನಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಡಾಕ್ಟರ್ ಕೆ.ಆನಂದ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><><>

ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಡಾ. ಕೆ.ಆನಂದ್ ಧ್ವನಿ 40 ಸೆಕೆಂದುಗಳು

<><><>

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯದಂದು, ಯುಗಾದಿ ಹಬ್ಬ. ಸಂಸ್ಕೃತದ 'ಯುಗ' ಮತ್ತು 'ಆದಿ' ಎಂಬ ಎರಡು ಶಬ್ದಗಳಿಂದ 'ಯುಗಾದಿ'. ಯುಗವೆಂದರೆ ಸೃಷ್ಟಿಯ ಕಾಲಮಾನ. ಅರ್ಥಾತ್ ಹೊಸ ವರ್ಷದ ಆರಂಭ. ಈ ಹಬ್ಬವನ್ನು ಕರ್ನಾಟಕದಲ್ಲಿ 'ಯುಗಾದಿ', ಮಹಾರಾಷ್ಟ್ರದಲ್ಲಿ 'ಗುಡಿ ಪಾಡವಾ', ಆಂಧ್ರಪ್ರದೇಶ ಹಾಗೂ ತಮಿಳುನಾಡಿನಲ್ಲಿ 'ಹೊಸ ವರ್ಷದ ಹಬ್ಬ'ವೆಂದು, ಉತ್ತರ ಭಾರತದಲ್ಲಿ 'ಬೈಸಾಖಿ' ಎಂದು ಆಚರಿಸಲಾಗುತ್ತದೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ ಧನಕರ, ಪ್ರಧಾನಮಂತ್ರಿ ನರೇಂದ್ರ ಮೋದಿ, ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಪ್ರತಿಪಕ್ಷ ನಾಯಕ ಆರ್. ಅಶೋಕ್ ನಾಡಿನ ಜನತೆಗೆ ಯುಗಾದಿ ಹಬ್ಬದ ಹಾರ್ದಿಕ ಶುಭಾಶಯ ಕೋರಿದ್ದಾರೆ.

<><><>

ಯುಗಾದಿ ಹಬ್ಬ ನಾಡಿಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ನಾಡವರಿಗೆ ನೆಮ್ಮದಿ ತರಲಿ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಶುಭಾಶಯ ಕೋರಿದ್ದಾರೆ.

<><><>

1974ರಲ್ಲಿ ಕರ್ನಾಟಕದ ರಣಜಿ ತಂಡ, ಮೊಟ್ಟಮೊದಲ ಬಾರಿಗೆ ರಣಜಿ ಟ್ರೋಫಿ ಜಯಿಸಿ ಇತಿಹಾಸ ನಿರ್ಮಿಸಿತ್ತು. ಕನ್ನಡಿಗರ ಈ ಸಾಧನೆಗೆ 50 ವ ´ಗಳು ತುಂಬುತ್ತಿರುವ ಸ್ಮರಣಾರ್ಥ, ಚಿನ್ನಸ್ವಾಮಿ ಕ್ರೀಡಾಂಗಣದ ಸ್ಟ್ಯಾಂಡ್‌ಗಳಿಗೆ ಪ್ರಶಸ್ತಿ ವಿಜೇತ ರಣಜಿ ತಂಡದ ಪ್ರಮುಖ ಆಟಗಾರರಾದ ಜಿ.ಆರ್. ವಿಶ್ವನಾಥ್, ಇ.ಎ.ಎಸ್. ಪ್ರಸನ್ನ ಹಾಗೂ ಬಿ.ಎಸ್. ಚಂದ್ರಶೇಖರ್ ಅವರ ಹೆಸರು ನಾಮಕರಣ ಮಾಡುವಂತೆ, ರಾಜ್ಯ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷ ರಘುರಾಮ್ ಭಟ್ ಅವರಿಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯ, ಯುಗಾದಿ ಹಬ್ಬದ ಪ್ರಯುಕ್ತ ಇಂದು, ಸಾರ್ವಜನಿಕರ ವೀಕ್ಷಣೆಗೆ ತೆರೆದಿದೆ ಎಂದು ಕಾರ್ಯನಿರ್ವಹಕ ನಿರ್ದೇಶಕರು ತಿಳಿಸಿದ್ದಾರೆ.

<><><>

ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲೂಕಿನ ಹಳೇ ಕುಂದೂರು ಗ್ರಾಮದಲ್ಲಿ, ಸಾಮೂಹಿಕ ಭೋಜನ ಸೇವಿಸಿ ಅಸ್ವಸ್ಥ ಗೊಂಡಿದ್ದ ಜನರ ಆರೋಗ್ಯ ಸ್ಥಿರವಾಗಿದೆ ಎಂದು, ಜಿಲ್ಲಾ ಆರೋಗ್ಯಾಧಿಕಾರಿ ತಿಳಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಬಿಸಿಲಿನ ಧಗೆ; ಮುನ್ನೆಚ್ಚರಿಕೆ ವಹಿಸುವಂತೆ, ಆರೋಗ್ಯ ಇಲಾಖೆ ಮನವಿ.
- 18ನೇ ಲೋಕಸಭಾ ಸಾರ್ವತ್ರಿಕ ಚುನಾವಣೆ; ಇದೇ 26 ರಂದು, ರಾಜ್ಯದ 14 ಕ್ಷೇತ್ರಗಳಲ್ಲಿ, ಪ್ರಥಮ ಹಂತದ ಮತದಾನ.
- ಲೋಕಸಭಾ ಚುನಾವಣೆ; ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ, ಸಾವಿರದ 3ನೂರಾ 84 ಪ್ರಕರಣಗಳು ದಾಖಲು.
- ಇಂದು, ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯ; ಸಂಭ್ರಮದ ಯುಗಾದಿ ಹಬ್ಬಕ್ಕೆ ನಾಡು ಅಣಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>